ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1166 (1315) |
| ಮಾನ್ಯ ಸದಸ್ಯರ ಹೆಸರು | | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 16.03.2026 |
| ಪ್ರಶ್ನೆ | | ಉತ್ತರ |
| ಅ) | ಉರ್ದು ಶಾಸ್ತ್ರೀಯ ಭಾಷೆಯಾಗಿರುವುದರಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಸರ್ಕಾರಿ ಕಾಲೇಜುಗಳಲ್ಲಿ ಉರ್ದು ವಿಷಯಕ್ಕೆ ಕನಿಷ್ಠ 5 ವಿದ್ಯಾರ್ಥಿಗಳಿದ್ದರೂ ಸಾಕು ಎಂಬ ನಿಯಮವನ್ನು ಜಾರಿಗೊಳಿಸಲಾಗುವುದೇ; | ವಿಶ್ವವಿದ್ಯಾಲಯ ಹಾಗೂ ಇತರೆ ಕೆಲವು ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಉರ್ದು ವ್ಯಾಸಂಗ ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಪದವಿ ಕೋರ್ಸುಗಳಲ್ಲಿ ಉರ್ದು ಸಾಮಾನ್ಯ ಭಾಷೆ ಮತ್ತು ಐಚ್ಛಿಕ ವಿಷಯದ ವಿದ್ಯಾರ್ಥಿಗಳ ಪ್ರವೇಶಾತಿ ಸಡಿಲಿಕೆಗೆ ಸಂಬಂಧಿಸಿದಂತೆ ಸರ್ಕಾರದ ಪತ್ರ ಸಂಖ್ಯೆ: ಇಡಿ 226 ಯುಇಸಿ 2016, ದಿನಾಂಕ: 16.09.2021 ರಲ್ಲಿ ಉರ್ದು ಭಾಷೆಯ ಮತ್ತು ಉರ್ದು ಭಾಷೆಯನ್ನು ಅಭ್ಯಸಿಸುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಉರ್ದು ಭಾಷೆಯು ಹೆಚ್ಚು ಬಳಕೆಯಲ್ಲಿರುವ ಕಲಬುರಗಿ ವಿಭಾಗದಲ್ಲಿ ವಿದ್ಯಾರ್ಥಿಗಳ ಕನಿಷ್ಠ ಸಂಖ್ಯೆಯನ್ನು 05ಕ್ಕೆ ನಿಗಧಿಗೊಳಿಸಲಾಗಿರುತ್ತದೆ.<br><br>ಉಳಿದ ವಿಭಾಗ/ವಲಯಗಳಲ್ಲಿ ಭಾಷಾ ವಿಷಯದಲ್ಲಿ 5ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಹಾಗೂ ಐಚ್ಛಿಕ ವಿಷಯಗಳಲ್ಲಿ 15ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಮಾಡಿಕೊಂಡಲ್ಲಿ ಅವರನ್ನು ಹತ್ತಿರದ ಇತರೆ ಸರ್ಕಾರಿ ಕಾಲೇಜುಗಳಿಗೆ ವರ್ಗಾಯಿಸುವಂತೆ ದಿನಾಂಕ: 30.05.2013ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ. |
| ಆ) | ಉರ್ದು ಇಲಾಖೆಯಗಳಲ್ಲಿ ಶಾಶ್ವತ ಉಪನ್ಯಾಸಕರನ್ನು ತಕ್ಷಣ ನೇಮಕ ಮಾಡಿಕೊಳ್ಳಲಾಗುವುದೇ; | ಪ್ರಸ್ತುತ ಉರ್ದು ವ್ಯಾಸಂಗ ವಿಭಾಗಗಳಿರುವ ರಾಜ್ಯದ ವಿಶ್ವವಿದ್ಯಾಲಯಗಳ ಪೈಕಿ ಖಾಯಂ ಉಪನ್ಯಾಸಕರು ಈಗಾಗಲೇ ಕಾರ್ಯನಿರ್ವಹಿಸುತ್ತಿದ್ದಾರೆ; ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಪ್ರಕರಣ 56 ರನ್ವಯ ಮಂಜೂರಾದ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ವಿಶ್ವವಿದ್ಯಾಲಯದ ಕುಲಪತಿಗಳಿಗೆ ಅಧಿಕಾರ ಪ್ರದತ್ತವಾಗಿದ್ದು, ಅದರಂತೆ ತಾತ್ಕಾಲಿಕವಾಗಿ ಸಿಬ್ಬಂದಿಯನ್ನು ನೇಮಿಸಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.<br>ಕಾಲೇಜು ಶಿಕ್ಷಣ ಇಲಾಖೆಯಲ್ಲಿ 2021ರಲ್ಲಿ ಕೈಗೊಳ್ಳಲಾದ ವಿವಿಧ ವಿಷಯಗಳ ಸಹಾಯಕ |
| ಇ) | ಸಂಶೋಧನಾ ಮಾರ್ಗದರ್ಶಕರ ಕೊರತೆಯನ್ನು ನೀಗಿಸಿ ಹೆಚ್ಚಿನ ಸಂಖ್ಯೆಯಲ್ಲಿ ಪಿ.ಹೆಚ್.ಡಿ. ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುವುದೇ; | |

| | | |
|---|---|---|
| | | ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಉರ್ದು ವಿಷಯದಲ್ಲಿ ಒಟ್ಟು 09 ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗಿದೆ. ಇದರಲ್ಲಿ 03 ಹುದ್ದೆಗಳು ಭರ್ತಿಯಾಗಿದ್ದು, ಉಳಿದ 06 ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. 03 ಹುದ್ದೆಗಳಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಈಗಾಗಲೇ ನೇಮಕಾತಿ ಆದೇಶವನ್ನು ಹೊರಡಿಸಲಾಗಿದ್ದು, ಕಾರ್ಯಭಾರಕ್ಕನುಗುಣವಾಗಿ ಹುದ್ದೆ ಖಾಲಿಯಿರುವ ಕಾಲೇಜುಗಳಿಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.<br><br>ಯುಜಿಸಿ ಪಿ.ಹೆಚ್‌ಡಿ ರೆಗ್ಯುಲೇಷನ್ಸ್, 2009, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ಹಾಗೂ ವಿಶ್ವವಿದ್ಯಾಲಯಗಳ ಪರಿನಿಯಮಗಳನ್ವಯ ಸಂಶೋಧನಾ ಮಾರ್ಗದರ್ಶಕರನ್ನು ಆಯ್ಕೆ ಮಾಡಲಾಗುತ್ತಿದೆ.<br><br>ಯುಜಿಸಿ ನಿಯಮಾನುಸಾರ ಸಂಶೋಧನಾ ಮಾರ್ಗದರ್ಶಕರ ಕೊರತೆಯನ್ನು ನೀಗಿಸಲು ಸರ್ಕಾರಿ ಪದವಿ ಕಾಲೇಜುಗಳಲ್ಲಿನ ಪ್ರಾಧ್ಯಾಕರಿಗೆ ಮಾರ್ಗದರ್ಶಕರಾಗಿ ಗುರುತಿಸಿ ಗುಲ್ಬರ್ಗಾ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಪಿ.ಹೆಚ್.ಡಿ. ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದೆ. |
| ಈ) | "ವರ್ಕ್‌ಲೋಡ್ ಇಲ್ಲ" ಎಂದ ಕಾರಣ ಅತಿಥಿ ಉಪನ್ಯಾಸಕರ ಸಂಖ್ಯೆಯನ್ನು ಕಡಿಮೆ ಮಾಡುವುದನ್ನು ಸಂಪೂರ್ಣ ನಿಲ್ಲಿಸಲಾಗುವುದೇ; | ಉರ್ದು ಕೋರ್ಸ್‌ಗೆ ಅಗತ್ಯವಿರುವ ಕಾರ್ಯಭಾರಕ್ಕೆ ಅನುಗುಣವಾಗಿ/ವಿದ್ಯಾರ್ಥಿಗಳ ಪ್ರವೇಶಾತಿಯ ಅನುಪಾತದನ್ವಯ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.<br><br>ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರದಲ್ಲಿ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಮಾತ್ರ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ (ಆಯಾ ಶೈಕ್ಷಣಿಕ ವರ್ಷಕ್ಕೆ ಅನ್ವಯಿಸುವಂತೆ) ನೇಮಿಸಿಕೊಳ್ಳಲಾಗುತ್ತಿದೆ. |
| ಉ) | ಉರ್ದು ಭಾಷೆ ಬೋಧನೆ ಮತ್ತು ಸಂಶೋಧನೆಯನ್ನು ಬಲಪಡಿಸಲು ಯಾವೆಲ್ಲ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ? | ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ 09 ಉರ್ದು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇಮಕಾತಿ ಮಾಡಲಾಗಿರುತ್ತದೆ.<br><br>ಉರ್ದು ಭಾಷೆ, ಸಾಹಿತ್ಯಕ್ಕೆ ಸಂಬಂಧಪಟ್ಟಂತೆ ಸೆಮಿನಾರ್, ವೆಬಿನಾರ್, ಕವಿಗೋಷ್ಠಿ/ಸಮ್ಮೇಳನಗಳನ್ನು ನಡೆಸಲಾಗುತ್ತಿದೆ.<br><br>ಬೆಂಗಳೂರು ವಿಶ್ವವಿದ್ಯಾಲಯವು ದಿನಾಂಕ: 15.07.2025 ರಂದು One day workshop on the topic "The Luminaries of Karnataka: A Contemporary |

| | | |
|---|---|---|
| | | Youth Perspective" ಕಾರ್ಯಾಗಾರವನ್ನು ಹಮ್ಮಿಕೊಂಡಿರುತ್ತದೆ. ಮುಂದುವರೆದು, ಉರ್ದು ಭಾಷೆಯನ್ನು ಶಾಸ್ತ್ರೀಯವಾಗಿ ಅಧ್ಯಯನ ಮಾಡುವ ಸಂಬಂಧದಲ್ಲಿನ ಸಂಶೋಧನಾ ಪತ್ರಿಕೆಗಳು, ಜರ್ನಲ್ಸ್ ಮತ್ತು ಪ್ರಕಟಣೆಗಳನ್ನು ವಿದ್ಯಾರ್ಥಿಗಳಿಗೆ ಒದಗಿಸಿರುತ್ತದೆ.<br><br>ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು 2023-24ನೇ ಶೈಕ್ಷಣಿಕ ಸಾಲಿನಿಂದ ಸ್ನಾತಕೋತ್ತರ ಉರ್ದು ವಿಷಯಕ್ಕೆ ಸಿಬಿಸಿಎಸ್ ಪದ್ಧತಿಯನ್ನು ಅಳವಡಿಸಿಕೊಂಡು ಉರ್ದು ವಿಷಯದಲ್ಲಿ ಆನ್‌ಲೈನ್ ಪ್ರೋಗ್ರಾಂನ್ನು ನಡೆಸಲಾಗುತ್ತಿದೆ. |

**ಸಂಖ್ಯೆ**: ಇಡಿ 79 ಯುಎನ್ಇ 2026

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು